ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:		868
ಮಾನ್ಯ ಸದಸ್ಯರ ಹೆಸರು		ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ಸಚಿವರು		ಉನ್ನತ ಶಿಕ್ಷಣ ಸಚಿವರು
ಉತ್ತರಿಸಬೇಕಾದ ದಿನಾಂಕ		20-09-2021
ಪ್ರಶ್ನೆ		**ಉತ್ತರ**
(ಅ)	ರಾಜ್ಯದಲ್ಲಿ ಹೆಚ್ಚಾಗುತ್ತಿರುವ ಜನಸಂಖ್ಯೆ, ಶಿಕ್ಷಣ ಸಂಸ್ಥೆಗಳು, ವಿದ್ಯಾರ್ಥಿಗಳ ಸಂಖ್ಯೆಗನುಗುಣವಾಗಿ ಉನ್ನತ ಶಿಕ್ಷಣ ಇಲಾಖೆಯಡಿ ವಿಶ್ವವಿದ್ಯಾಲಯಗಳನ್ನು ಹೊಸದಾಗಿ ಸೃಜಿಸುವ ಚಿಂತನೆ ಸರ್ಕಾರಕ್ಕೆ ಇದೆಯೇ;	ರಾಷ್ಟ್ರೀಯ ಶಿಕ್ಷಣ ನೀತಿ-2020ರ ಪ್ರಕಾರ ರಾಜ್ಯದ ಪ್ರತಿ ಜಿಲ್ಲೆಗಳಲ್ಲಿ ಬಹುಶಿಸ್ತೀಯ ವಿಶ್ವವಿದ್ಯಾಲಯಗಳನ್ನು (multi-disciplinary university) ಸ್ಥಾಪಿಸುವ ಉದ್ದೇಶವಿದೆ. ಕಲ್ಯಾಣ ಕರ್ನಾಟಕ ಪ್ರದೇಶದ ವ್ಯಾಪ್ತಿಗೊಳಪಡುವ ಕೊಪ್ಪಳ ಜಿಲ್ಲೆಯ ವಿದ್ಯಾರ್ಥಿಗಳಿಗೆ ಹಾಗೂ ಆ ಭಾಗದ ಅಭಿವೃದ್ಧಿಯ ಹಿತದೃಷ್ಟಿಯಿಂದ ಕೊಪ್ಪಳದಲ್ಲಿ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಸ್ನಾತಕೋತ್ತರ ಕೇಂದ್ರದಲ್ಲಿ ಬಹುಶಿಸ್ತೀಯ ವಿಶ್ವವಿದ್ಯಾಲಯಗಳನ್ನು (multi-disciplinary university) ಹಾಗೂ ಚಾಮರಾಜನಗರ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮೈಸೂರು ವಿಶ್ವವಿದ್ಯಾಲಯದ ಸ್ನಾತಕೋತ್ತರ ಕೇಂದ್ರವನ್ನು ಮುಖ್ಯ ಆವರಣವನ್ನಾಗಿಸಿ ಚಾಮರಾಜನಗರ ಜಿಲ್ಲೆಯಲ್ಲಿ ಹೊಸದಾಗಿ ವಿಶ್ವವಿದ್ಯಾಲಯವನ್ನು ಸ್ಥಾಪಿಸಲು ಉದ್ದೇಶಿಸಲಾಗಿದೆ.
(ಆ)	ಹಾಗಿದ್ದಲ್ಲಿ, ಈ ನಿಟ್ಟಿನಲ್ಲಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು;	ಕೊಪ್ಪಳ ಜಿಲ್ಲೆಯಲ್ಲಿ ವಿಶ್ವವಿದ್ಯಾನಿಲಯವನ್ನು ಸ್ಥಾಪಿಸುವ ಕುರಿತಂತೆ ಪರಿಶೀಲಿಸಿ ವಿವರವಾದ ವರದಿಯನ್ನು ನೀಡಲು ಆದೇಶ ಸಂಖ್ಯೆ: ಇಡಿ 69 ಯುಎನ್ಇ 2021, ದಿನಾಂಕ: 01-04-2021ರಲ್ಲಿ ಕುಲಪತಿಗಳು, ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾನಿಲಯ, ಬಳ್ಳಾರಿ ಇವರ ಅಧ್ಯಕ್ಷತೆಯಲ್ಲಿ ಒಂದು ಸಮಿತಿಯನ್ನು ಹಾಗೂ ಚಾಮರಾಜನಗರದಲ್ಲಿ ವಿಶ್ವವಿದ್ಯಾನಿಲಯವನ್ನು ಸ್ಥಾಪಿಸುವ ಕುರಿತು ಆದೇಶ ಸಂಖ್ಯೆ: ಇಡಿ 25 ಯುಎಂವಿ ೨೦೨೧, ದಿನಾಂಕ: ೩೧-೦೩-೨೦೨೧ರಲ್ಲಿ ಕುಲಪತಿಗಳು, ಮೈಸೂರು ವಿಶ್ವವಿದ್ಯಾನಿಲಯ ಇವರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಲಾಗಿರುತ್ತದೆ. ಮೇಲ್ಕಂಡ ಸಮಿತಿಗಳು ಸರ್ಕಾರಕ್ಕೆ ವರದಿ ಸಲ್ಲಿಸಿದ ನಂತರ ಕೊಪ್ಪಳ ಹಾಗೂ ಚಾಮರಾಜನಗರ ಜಿಲ್ಲೆಯಲ್ಲಿ ವಿಶ್ವವಿದ್ಯಾನಿಲಯಗಳನ್ನು ಪ್ರಾರಂಭಿಸುವ ಕುರಿತು ಮುಂದಿನ ಕ್ರಮಕೈಗೊಳ್ಳಲಾಗುವುದು. ರಾಷ್ಟ್ರೀಯ ಶಿಕ್ಷಣ ನೀತಿ-2020ರ ಪ್ರಕಾರ ರಾಜ್ಯದ ಪ್ರತಿ ಜಿಲ್ಲೆಗಳಲ್ಲಿ ಬಹುಶಿಸ್ತೀಯ ವಿಶ್ವವಿದ್ಯಾಲಯಗಳನ್ನು (multi-disciplinary university) ಸ್ಥಾಪಿಸುವ ಉದ್ದೇಶವಿದೆ

(ಇ)	ರಾಜ್ಯದಲ್ಲಿರುವ ಒಟ್ಟು ಸರ್ಕಾರಿ ಹಾಗೂ ಖಾಸಗಿ ವಿಶ್ವವಿದ್ಯಾಲಯಗಳ ಸಂಖ್ಯೆ ಎಷ್ಟು; ಅವು ಯಾವುವು; ಎಷ್ಟು ವಿಶ್ವವಿದ್ಯಾಲಯಗಳಲ್ಲಿ ಕುಲಪತಿಗಳ ಹುದ್ದೆ ಖಾಲಿ ಇವೆ;	ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಯಡಿಯಲ್ಲಿ ಒಟ್ಟು 23 ಸರ್ಕಾರಿ ವಿಶ್ವವಿದ್ಯಾನಿಲಯ ಗಳು ಹಾಗೂ 20 ಖಾಸಗಿ ವಿಶ್ವವಿದ್ಯಾನಿಲಯಗಳು ಕಾರ್ಯನಿರ್ವಹಿಸುತ್ತಿವೆ. **ವಿಶ್ವವಿದ್ಯಾನಿಲಯಗಳ ವಿವರವನ್ನು ಅನುಬಂಧದಲ್ಲಿ ಲಗತ್ತಿಸಿದೆ.** ಪ್ರಸ್ತುತ ಬೆಂಗಳೂರು ಉತ್ತರ ವಿಶ್ವವಿದ್ಯಾನಿಲಯದಲ್ಲಿ ಮಾತ್ರ ಕುಲಪತಿಗಳ ಹುದ್ದೆ ಖಾಲಿ ಇದ್ದು, ಉಳಿದ 22 ವಿಶ್ವವಿದ್ಯಾನಿಲಯಗಳಲ್ಲಿ ಪೂರ್ಣಕಾಲಿಕ ಕುಲಪತಿಗಳು ಕಾರ್ಯನಿರ್ವಹಿಸುತ್ತಿದ್ದಾರೆ.
(ಈ)	ವಿಶ್ವವಿದ್ಯಾಲಯಗಳಿಗೆ ಕುಲಪತಿಗಳನ್ನು ನೇಮಿಸಲು ಇರುವ/ಅನುಸರಿಸುವ ಮಾನದಂಡಗಳೇನು;	ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ 2000ರ ಪ್ರಕರಣ 14ರಂತೆ, ಕರ್ನಾಟಕ ಜಾನಪದ ವಿಶ್ವವಿದ್ಯಾಲಯ ಅಧಿನಿಯಮ, 2011ರ ಪ್ರಕರಣ 13ರಂತೆ, ಕರ್ನಾಟಕ ರಾಜ್ಯ ಡಾ: ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯ ಅಧಿನಿಯಮ, 2009ರ ಪ್ರಕರಣ 12ರಂತೆ, ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾನಿಲಯ ಅಧಿನಿಯಮ 2009ರ ಪ್ರಕರಣ 12ರಂತೆ, ಕನ್ನಡ ವಿಶ್ವವಿದ್ಯಾನಿಲಯ ಅಧಿನಿಯಮ 1991ರ ಪ್ರಕರಣ 13ರಂತೆ, ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾನಿಲಯ ಅಧಿನಿಯಮ 1994ರ ಪ್ರಕರಣ 13ರಂತೆ ಮತ್ತು ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ ಅಧಿನಿಯಮ 1992ರ ಪ್ರಕರಣ 10ರಂತೆ ಹಾಗೂ ವಿಶ್ವವಿದ್ಯಾನಿಲಯ ಧನ ಸಹಾಯ ಆಯೋಗದ ಮಾರ್ಗಸೂಚಿಗಳನ್ವಯ ಉನ್ನತ ಮಟ್ಟದ ಸಾಮರ್ಥ್ಯ, ಪ್ರಾಮಾಣಿಕತೆ, ಸಮಗ್ರತೆ, ಋಜುತ್ವ, ನೈತಿಕ ಮೌಲ್ಯಗಳನ್ನು ಹಾಗೂ ಸಾಂಸ್ಥಿಕ ಬದ್ಧತೆಯನ್ನು ಹೊಂದಿರುವ ವ್ಯಕ್ತಿಗಳು, ವಿಶ್ವವಿದ್ಯಾಲಯಗಳಲ್ಲಿ ಪ್ರಾಧ್ಯಾಪಕರಾಗಿ ಕನಿಷ್ಟ 10 ವರ್ಷ ಸೇವೆ ಸಲ್ಲಿಸಿದ ಅಥವಾ ತತ್ಸಮಾನವಾದ ಸ್ಥಾನ-ಮಾನದಲ್ಲಿ ವಿಖ್ಯಾತ ಸಂಶೋಧನಾ ಅಥವಾ ಶೈಕ್ಷಣಿಕ ಆಡಳಿತ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸಿದ ಅನುಭವವುಳ್ಳ ಗಣ್ಯ ಶಿಕ್ಷಣ ತಜ್ಞರು ರಾಜ್ಯದ ವಿಶ್ವವಿದ್ಯಾಲಯಗಳ ಕುಲಪತಿ ಹುದ್ದೆಗೆ ಅರ್ಹರಿರುತ್ತಾರೆ. • ಕರ್ನಾಟಕ ಜಾನಪದ ವಿಶ್ವವಿದ್ಯಾಲಯದ ಕುಲಪತಿ ಹುದ್ದೆಗೆ ಸಂಬಂಧಿಸಿದಂತೆ ಅರ್ಹ ಪ್ರಾಧ್ಯಾಪಕರು, ಖ್ಯಾತ ಜಾನಪದ ತಜ್ಞರಾಗಿರಬೇಕು. • ಕರ್ನಾಟಕ ರಾಜ್ಯ ಡಾ: ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯದ ಕುಲಪತಿ ಹುದ್ದೆಗೆ ಸಂಬಂಧಿಸಿದಂತೆ ಅರ್ಹ ಪ್ರಾಧ್ಯಾಪಕರು ಸಂಗೀತ ಮತ್ತು ಪ್ರದರ್ಶಕ ಕಲೆಗಳ ಕ್ಷೇತ್ರಗಳಲ್ಲಿ ಖ್ಯಾತ ಶಿಕ್ಷಣ ತಜ್ಞರಾಗಿರಬೇಕು. • ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾನಿಲಯದ ಕುಲಪತಿ ಹುದ್ದೆಗೆ ಸಂಬಂಧಿಸಿದಂತೆ ಅರ್ಹ ಪ್ರಾಧ್ಯಾಪಕರು ಇಂಜಿನೀಯರಿಂಗ್, ತಂತ್ರಜ್ಞಾನ ಅಥವಾ ಶಿಕ್ಷಣ ಕ್ಷೇತ್ರದಲ್ಲಿ ತಜ್ಞರಾಗಿರಬೇಕು. • ಅಕ್ಕಮಹಾದೇವಿ ವಿಶ್ವವಿದ್ಯಾಲಯದ ಕುಲಪತಿ ಹುದ್ದೆಗೆ ಸಂಬಂಧಿಸಿದಂತೆ ಅರ್ಹ ಪ್ರಾಧ್ಯಾಪಕರು ಸಾಧ್ಯವಾದಷ್ಟು ಮಟ್ಟಿಗೆ ಒಬ್ಬ ಮಹಿಳೆಯೇ ಕುಲಪತಿಯಾಗತಕ್ಕದ್ದು.

		ಶೋಧನಾ ಸಮಿತಿಯು ಸಲ್ಲಿಸಿದ ಆಯ್ಕೆ ಪಟ್ಟಿಯನ್ನು ಗೌರವಾನ್ವಿತ ರಾಜ್ಯಪಾಲರ ಅನುಮೋದನೆಗಾಗಿ ಸಲ್ಲಿಸಿದ ನಂತರ ಗೌರವಾನ್ವಿತ ರಾಜ್ಯಪಾಲರ ಸಚಿವಾಲಯದಿಂದ ಕುಲಪತಿಗಳನ್ನು ನೇಮಿಸಿ ಆದೇಶ ಹೊರಡಿಸಲಾಗುವುದು.
(ಉ)	ಯಾವ ಕಾಲಮಿತಿಯಲ್ಲಿ ಖಾಲಿ ಇರುವ ಕುಲಪತಿಗಳ ನೇಮಕಾತಿ ಮಾಡಲಾಗುವುದು;	ಬೆಂಗಳೂರು ಉತ್ತರ ವಿಶ್ವವಿದ್ಯಾನಿಲಯದ ಕುಲಪತಿಗಳ ನೇಮಕಾತಿ ಸಂಬಂಧ ಈಗಾಗಲೇ ದಿನಾಂಕ: 13-09-2021ರಂದು ಶೋಧನಾ ಸಮಿತಿಯನ್ನು ನಡೆಸಲಾಗಿದ್ದು, ಶೀಘ್ರದಲ್ಲಿಯೇ ಪೂರ್ಣಕಾಲಿಕ ಕುಲಪತಿಗಳನ್ನು ನೇಮಕ ಮಾಡಲಾಗುವುದು.
(ಊ)	ಹಲವು ಸಂದರ್ಭಗಳಲ್ಲಿ ವರ್ಷವಿಡೀ ಹಂಗಾಮಿ ಕುಲಪತಿಗಳನ್ನು ನೇಮಿಸಿರುವುದರಿಂದ, ವಿಶ್ವವಿದ್ಯಾಲಯಗಳ ಆಡಳಿತದಲ್ಲಿ ಕುಸಿತ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಇದನ್ನು ಸರಿಪಡಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?	ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.

ಸಂಖ್ಯೆ: ಇಡಿ ೨೩೫ ಯುಎನ್‌ಇ ೨೦೨೧

(ಡಾ: ಅಶ್ವಥ್ ನಾರಾಯಣ ಸಿ.ಎನ್.)
ಉನ್ನತ ಶಿಕ್ಷಣ, ಐಟಿ & ಬಿಟಿ, ವಿಜ್ಞಾನ ಮತ್ತು ತಂತ್ರಜ್ಞಾನ,
ವಿದ್ಯುನ್ಮಾನ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು.

ಅನುಬಂಧ

ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಾರ್ವಜನಿಕ ಹಾಗೂ ಖಾಸಗಿ ವಿಶ್ವವಿದ್ಯಾನಿಲಯಗಳ ವಿವರ

ಸಾರ್ವಜನಿಕ ವಿಶ್ವವಿದ್ಯಾನಿಲಯಗಳು: | ಖಾಸಗಿ ವಿಶ್ವವಿದ್ಯಾಲಯಗಳು:

ಕ್ರ ಸಂ.	ವಿಶ್ವವಿದ್ಯಾನಿಲಯದ ಹೆಸರು	ಕ್ರ ಸಂ.	ವಿಶ್ವವಿದ್ಯಾನಿಲಯದ ಹೆಸರು
1	ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು	1	ಅಲಯನ್ಸ್ ವಿಶ್ವವಿದ್ಯಾಲಯ, ಬೆಂಗಳೂರು
2	ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ, ಬೆಂಗಳೂರು	2	ಅಜೀಮ್ ಪ್ರೇಮ್‌ಜಿ ವಿಶ್ವವಿದ್ಯಾಲಯ, ಬೆಂಗಳೂರು
3	ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ	3	ಪ್ರೆಸಿಡೆನ್ಸಿ ವಿಶ್ವವಿದ್ಯಾಲಯ, ಬೆಂಗಳೂರು
4	ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯ, ಬಳ್ಳಾರಿ	4	ಸಿಎಂಆರ್ ವಿಶ್ವವಿದ್ಯಾಲಯ, ಬೆಂಗಳೂರು
5	ತುಮಕೂರು ವಿಶ್ವವಿದ್ಯಾಲಯ, ತುಮಕೂರು	5	ಪಿಇಎಸ್ ವಿಶ್ವವಿದ್ಯಾಲಯ, ಬೆಂಗಳೂರು
6	ಕುವೆಂಪು ವಿಶ್ವವಿದ್ಯಾಲಯ, ಶಿವಮೊಗ್ಗ	6	ಎಂ.ಎಸ್. ರಾಮಯ್ಯ ಅನ್ವಯಿಕ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರು
7	ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾವಿ	7	ರೇವಾ ವಿಶ್ವವಿದ್ಯಾಲಯ, ಬೆಂಗಳೂರು
8	ಮೈಸೂರು ವಿಶ್ವವಿದ್ಯಾಲಯ, ಮೈಸೂರು	8	ದಯಾನಂದ ಸಾಗರ್ ವಿಶ್ವವಿದ್ಯಾಲಯ, ಬೆಂಗಳೂರು
9	ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ	9	ರೈ ತಾಂತ್ರಿಕ ವಿಶ್ವವಿದ್ಯಾಲಯ, ಬೆಂಗಳೂರು
10	ಗುಲ್ಬರ್ಗ ವಿಶ್ವವಿದ್ಯಾಲಯ, ಕಲಬುರಗಿ	10	ಕೆ.ಎಲ್.ಇ. ತಾಂತ್ರಿಕ ವಿಶ್ವವಿದ್ಯಾಲಯ, ಹುಬ್ಬಳ್ಳಿ
11	ಮಂಗಳೂರು ವಿಶ್ವವಿದ್ಯಾಲಯ, ಮಂಗಳೂರು	11	ಜೆ.ಎಸ್.ಎಸ್. ತಾಂತ್ರಿಕ ವಿಶ್ವವಿದ್ಯಾಲಯ, ಮೈಸೂರು
12	ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯ, ವಿಜಯಪುರ	12	ಗಾರ್ಡನ್ ಸಿಟಿ ವಿಶ್ವವಿದ್ಯಾಲಯ, ಬೆಂಗಳೂರು
13	ದಾವಣಗೆರೆ ವಿಶ್ವವಿದ್ಯಾಲಯ, ದಾವಣಗೆರೆ	13	ಶ್ರೀನಿವಾಸ್ ವಿಶ್ವವಿದ್ಯಾಲಯ, ಮಂಗಳೂರು
14	ಬೆಂಗಳೂರು ನಗರ ವಿಶ್ವವಿದ್ಯಾಲಯ, ಬೆಂಗಳೂರು	14	ಶರಣ ಬಸವ ವಿಶ್ವವಿದ್ಯಾಲಯ, ಕಲಬುರಗಿ
15	ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ಕೋಲಾರ	15	ಆದಿಚುಂಚನಗಿರಿ ವಿಶ್ವವಿದ್ಯಾಲಯ, ನಾಗಮಂಗಲ
16	ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ, ಮೈಸೂರು	16	ಖಾಜಾ ಬಂದಾ ನವಾಜ್ ವಿಶ್ವವಿದ್ಯಾಲಯ, ಕಲಬುರಗಿ
17	ಕರ್ನಾಟಕ ರಾಜ್ಯ ಜಾನಪದ ವಿಶ್ವವಿದ್ಯಾಲಯ, ಗೊಟಗೋಡಿ, ಹಾವೇರಿ	17	ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ವಿಶ್ವವಿದ್ಯಾಲಯ, ಧಾರವಾಡ
18	ಕರ್ನಾಟಕ ರಾಜ್ಯ ಡಾ: ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯ, ಮೈಸೂರು	18	ಶ್ರೀ ಸತ್ಯಸಾಯಿ ಮಾನವ ಅಭ್ಯುದಯ ವಿಶ್ವವಿದ್ಯಾಲಯ, ಕಲಬುರಗಿ
19	ಕನ್ನಡ ವಿಶ್ವವಿದ್ಯಾಲಯ, ಹಂಪಿ	19	ಎನ್.ಐ.ಇ. ವಿಶ್ವವಿದ್ಯಾಲಯ, ಮೈಸೂರು
20	ರಾಯಚೂರು ವಿಶ್ವವಿದ್ಯಾನಿಲಯ, ರಾಯಚೂರು	20	ಆರ್.ವಿ. ವಿಶ್ವವಿದ್ಯಾಲಯ, ಬೆಂಗಳೂರು.
21	ನೃಪತುಂಗ ವಿಶ್ವವಿದ್ಯಾಲಯ, ಬೆಂಗಳೂರು.		
22	ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯ, ಬೆಂಗಳೂರು		
23	ಮಂಡ್ಯ ವಿಶ್ವವಿದ್ಯಾಲಯ, ಮಂಡ್ಯ.		